AUGUST 26, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಪಿ.ಎಂ.ಎಫ್.ಎಂ.ಇ– ಪ್ರಧಾನಮಂತ್ರಿ ಕಿರು ಆಹಾರ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ ಅನುಷ್ಠಾನದಲ್ಲಿ ಬೆಳಗಾವಿ ಜಿಲ್ಲೆ, ರಾಜ್ಯದಲ್ಲೇ ಉತ್ತಮ ಪ್ರಗತಿ ಸಾಧಿಸಿದೆ. ಒಟ್ಟು 1 ಸಾವಿರದ 279 ಕಿರು ಉದ್ದಿಮೆದಾರರಿಗೆ, 97 ಕೋಟಿ 14 ಲಕ್ಷ ರೂಪಾಯಿ ಬ್ಯಾಂಕ್ ಸಹಾಯಧನ ಒದಗಿಸಲಾಗಿದೆ. ಕೇಂದ್ರ ಆಹಾರ ಸಂಸ್ಕರಣಾ ಸಚಿವಾಲಯ ಹೊಸದಿಲ್ಲಿಯಲ್ಲಿ ಆಯೋಜಿಸಿದ್ದ, ಪಿ.ಎಂ.ಎಫ್.ಎಂ.ಇ ಸಮಾವೇಶದಲ್ಲಿ, ಕೇಂದ್ರ ಆಹಾರ ಸಂಸ್ಕರಣಾ ಕೈಗಾರಿಕೆಗಳ ಖಾತೆ ಸಚಿವ ಚಿರಾಗ ಪಾಸ್ವಾನ್, ಬೆಳಗಾವಿ ಜಿಲ್ಲೆಯ ಸಾಧನೆಯನ್ನು ಗುರುತಿಸಿ, ಸ್ಮರಣಿಕೆ ಹಾಗೂ ಪ್ರಮಾಣ ಪತ್ರವನ್ನು ಪ್ರದಾನಿಸಿದರು. ಜಿಲ್ಲಾ ಕೃಷಿ ಇಲಾಖೆ ಜಂಟಿ ನಿರ್ದೇಶಕ ಎಚ್.ಡಿ ಕೋಳೇಕರ ಸನ್ಮಾನ ಪತ್ರ ಸ್ವೀಕರಿಸಿದರು.

<><><>

ವಿಶ್ವವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವ 2026 ರ, ಗಜಪಯಣಕ್ಕೆ ಇಂದು ನಗರಾಭಿವೃದ್ಧಿ ಖಾತೆ ಸಚಿವ ಡಾಕ್ಟರ ಯತೀಂದ್ರ ಸಿದ್ದರಾಮಯ್ಯ, ಹುಣಸೂರು ಸಮೀಪದ ವೀರನಹೊಸಹಳ್ಳಿಯಲ್ಲಿ ಸಾಂಪ್ರದಾಯಿಕ ಚಾಲನೆ ನೀಡಿದರು. ಧಾರ್ಮಿಕ ಪೂಜೆಯ ಬಳಿಕ, ನಾಡಹಬ್ಬ ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವ ಮಹೇಂದ್ರ, ಶ್ರೀಕಂಠ, ಲಕ್ಷ್ಮೀ, ಏಕಲವ್ಯ ಸೇರಿದಂತೆ ಒಟ್ಟು 9 ಆನೆಗಳು ಮೈಸೂರಿನತ್ತ ಪಯಣ ಬೆಳೆಸಿದವು.

<><><>

ರೈತರ ಹಿತದೃಷ್ಟಿಯಿಂದ, ರಾಜ್ಯದಲ್ಲಿ ಮೋಡ ಬಿತ್ತನೆ ಮಾಡಲು ತೀರ್ಮಾನಿಸಲಾಗಿದೆ. ಸೆಪ್ಟೆಂಬರ್ ಹಾಗೂ ಅಕ್ಟೋಬರ್‌ನಲ್ಲಿ ಪೂರಕ ವಾತಾವರಣ ಇರಲಿದ್ದು, 60 ದಿನಗಳ ಕಾಲ, ಪ್ರತಿದಿನ ಬೆಳಗ್ಗೆ 8 ಗಂಟೆಯಿಂದ, ಸಂಜೆ 6 ರ ವರೆಗೆ, ನಾಲ್ಕು ಕಂದಾಯ ವಿಭಾಗಗಳಲ್ಲಿ ಮೋಡ ಬಿತ್ತನೆ ಪ್ರಕ್ರಿಯೆ ನಡೆಯಲಿದೆ ಎಂದು ಜಲ ಸಂಪನ್ಮೂಲ ಖಾತೆ ಸಚಿವ ಎನ್.ಚಲುವರಾಯ ಸ್ವಾಮಿ ತಿಳಿಸಿದ್ದಾರೆ. ಎಕ್ಸ್ ಖಾತೆ ಮೂಲಕ ಮಾಹಿತಿ ಹಂಚಿಕೊಂಡಿರುವ ಸಚಿವರು, ಈ ಬಾರಿ ಮುಂಗಾರು ಮಳೆಯ ಪ್ರಮಾಣ ಕಡಿಮೆಯಾದ ಹಿನ್ನೆಲೆ, ರಾಜ್ಯಾದ್ಯಂತ ಉಂಟಾಗಿರುವ ನೀರಿನ ಕೊರತೆ ನೀಗಿಸುವುದು ಸರ್ಕಾರದ ಆದ್ಯತೆಯಾಗಿದೆ. ಮೋಡ ಬಿತ್ತನೆ ನಿಟ್ಟಿನಲ್ಲಿ, ಮೂರು ಸಮಿತಿಗಳನ್ನು ರಚಿಸಿ, ಮುಂದಿನ 2 ದಿನಗಳಲ್ಲಿ ಚಾಲನೆ ನೀಡಲಾಗುವುದು ಎಂದು ತಿಳಿಸಿದ್ದಾರೆ.

<><><>

ಎನ್.ಚಲುವರಾಯ ಸ್ವಾಮಿ ಧ್ವನಿ– 40 ಸೆಕೆಂದುಗಳು

<><><>

ಇಂದು ಸೇವಾದಳದ ಸಂಸ್ಥಾಪಕ, ಸ್ವಾತಂತ್ರ್ಯ ಹೋರಾಟಗಾರ ಡಾಕ್ಟರ ಎನ್.ಎಸ್ ಹರ್ಡೀಕರ್ ಅವರ ಪುಣ್ಯತಿಥಿ. ಮಹಾತ್ಮ ಗಾಂಧಿ ಅವರ ಮಾರ್ಗದರ್ಶನದಲ್ಲಿ, ದೇಶದ ಮೂಲೆ ಮೂಲೆಗಳಿಗೆ ಸಂಚರಿಸಿ, ಯುವಕರನ್ನು ಸಂಘಟಿಸಿ, ಮಾರ್ಗದರ್ಶಿಸಿದ ಕೀರ್ತಿ ಹರ್ಡೀಕರ್ ಅವರದು, ಎಂದಿರುವ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ತಮ್ಮ ಎಕ್ಸ್ ಖಾತೆಯ ಮೂಲಕ ಹರ್ಡೀಕರ್ ಕೊಡುಗೆಗಳನ್ನು ಸ್ಮರಿಸಿ, ಗೌರವ ನಮನಗಳನ್ನು ಸಲ್ಲಿಸಿದ್ದಾರೆ.

<><><>

ಇಂದು ನಾಡಿನ ವಿವಿಧೆಡೆ ಮುಸ್ಲಿಂ ಬಾಂಧವರು, ಶ್ರದ್ಧೆ ಹಾಗೂ ಸಂಭ್ರಮದೊಂದಿಗೆ ಈದ್ ಮಿಲಾದ್ ಹಬ್ಬವನ್ನು ಆಚರಿಸುತ್ತಿದ್ದಾರೆ. ಮುಖ್ಯಮಂತ್ರಿ ಡಿ.ಕೆ ಶಿವಕುಮಾರ, ಉಪ ಮುಖ್ಯಮಂತ್ರಿ ಡಾಕ್ಟರ ಜಿ. ಪರಮೇಶ್ವರ ಸೇರಿದಂತೆ ಹಲವು ಗಣ್ಯರು, ನಾಡಿನ ಸಮಸ್ತ ಮುಸ್ಲಿಂ ಬಾಂಧವರಿಗೆ ಈದ್ ಮಿಲಾದ್ ಹಬ್ಬದ ಶುಭಾಶಯಗಳನ್ನು ಕೋರಿದ್ದಾರೆ.

<><><>

ಆಕಾಶವಾಣಿಯ ಬಹುಶ್ರುತ 'ಮನ್ ಕಿ ಬಾತ್' ಕಾರ್ಯಕ್ರಮದ 137 ನೇ ಆವೃತ್ತಿ, 30 ನೇ ತಾರೀಖು, ಭಾನುವಾರ ಬೆಳಗ್ಗೆ 11 ಗಂಟೆಗೆ ಪ್ರಸಾರವಾಗಲಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ, ದೇಶ, ವಿದೇಶಗಳಲ್ಲಿರುವ ಭಾರತೀಯರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಾಗರಿಕರು ತಮ್ಮ ಅನಿಸಿಕೆಗಳನ್ನು, ಈ ತಿಂಗಳ 28 ನೇ ತಾರೀಖು ರಾತ್ರಿ 11.45 ರೊಳಗೆ ಮೈಗಾವ್ ಜಾಲತಾಣದ ಮೂಲಕ ಹಂಚಿಕೊಳ್ಳಬಹುದು ಅಥವಾ 1922 ಸಂಖ್ಯೆಗೆ ಕರೆ ಮಾಡಿ, ಸಿಗುವ ಲಿಂಕ್ ಬಳಸಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದು.

<><><>

ಬಾಗಲಕೋಟೆ ಜಿಲ್ಲೆಯ, ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಪೂರೈಸಿದ ರೈತರಿಗೆ, ಪಾವತಿಸಬೇಕಾದ ಹೆಚ್ಚುವರಿ ಶೇಕಡಾ 50ರ ಬಾಕಿ ಹಣವನ್ನು ಕೂಡಲೇ ಪಾವತಿಸುವಂತೆ ಜಿಲ್ಲಾಧಿಕಾರಿ ಸಂಗಪ್ಪ, ಸಕ್ಕರೆ ಕಾರ್ಖಾನೆಗಳ ಮಾಲಿಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಸಕ್ಕರೆ ಕಾರ್ಖಾನೆಗಳ ಮಾಲಿಕರೊಂದಿಗೆ ನಡೆದ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

<><><>

ರಾಜ್ಯದಲ್ಲಿ ಬದಲಾಗುತ್ತಿರುವ ಹವಾಮಾನದ ಹಿನ್ನೆಲೆ, ಋತುಮಾನ ಜ್ವರದ ಪ್ರಕರಣಗಳು ಹೆಚ್ಚಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ರಾಯಚೂರು ಜಿಲ್ಲಾ ಆರೋಗ್ಯ ಕಲ್ಯಾಣ ಇಲಾಖೆ ಅಧಿಕಾರಿ ಡಾಕ್ಟರ ನಂದಿತಾ ಎಮ್.ಎನ್. ತಿಳಿಸಿದ್ದಾರೆ.

<><><>

ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆಯವರ ಜನ್ಮ ಶತಮಾನೋತ್ಸವ ಆಚರಣೆ ಕಾರ್ಯಕ್ರಮ, 29 ನೇ ತಾರೀಖಿನಂದು ಮಧ್ಯಾಹ್ನ 2.45 ಕ್ಕೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಆಯೋಜಿತವಾಗಿದೆ.

<><><>

ಕೊಡಗು ಸೇರಿದಂತೆ, ಕಾವೇರಿ ಜಲಾನಯನ ಪ್ರದೇಶದಲ್ಲಿ ಅಬ್ಬರದ ಮಳೆ ಆಗುತ್ತಿರುವ ಹಿನ್ನೆಲೆ, ಮಂಡ್ಯ ಜಿಲ್ಲೆಯ ಕೃಷ್ಣರಾಜ ಸಾಗರ ಅಣೆಕಟ್ಟೆಯ ಒಳ ಹರಿವಿನ ಪ್ರಮಾಣದಲ್ಲಿ ಏರಿಕೆಯಾಗಿದೆ. 124 ಅಡಿ ಎತ್ತರದ ಜಲಾಶಯದಲ್ಲಿ, ಇಂದು 9 ಸಾವಿರದ 438 ಕ್ಯೂಸೆಕ್ ನೀರಿನ ಒಳ ಹರಿವಿದ್ದು, 4 ಸಾವಿರದ 478 ಕ್ಯೂಸೆಕ್ ಹೊರ ಹರಿವಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>